ಅರಣ್ಯ ಇಲಾಖೆಯಲ್ಲಿನ ದಿನಗೂಲಿ ನೌಕರರ ಖಾಯಂಗೊಳಿಸುವುದು

758(1363) ಶ್ರೀ ಅಪ್ಪಾಜಿ @ ಚನ್ನಬಸವರಾಜ ಶಂಕರರಾವ್ ನಾಡಗೌಡ:(ಮುದ್ದೇಬಿಹಾಳ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಅರಣ್ಯ ಇಲಾಖೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ದಿನಗೂಲಿ ನೌಕರರ ಸಂಖ್ಯೆ ಎಷ್ಟು;

ಆ) ಇವರಲ್ಲಿ ಅರಣ್ಯ ರಕ್ಷಕರು ಮತ್ತು ಕಚೇರಿ ಸಿಬ್ಬಂದಿಗಳ ಸಂಖ್ಯೆ ಎಷ್ಟು;

ಇ) ಎಷ್ಟು ವರ್ಷಗಳಿಂದ ಇವರುಗಳು ಕೆಲಸ ಮಾಡುತ್ತಿದ್ದಾರೆ;

ಈ) ಇವರನ್ನು ಖಾಯಂಗೊಳಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮವೇನು; (ಪೂರ್ಣ ಮಾಹಿತಿ ನೀಡುವುದು)

ಶ್ರೀ ಬಿ ಎಸ್ ಯಡಿಯೂರಪ್ಪ(ಮುಖ್ಯಮಂತ್ರಿಗಳು)

ಅ) ಅರಣ್ಯ ಇಲಾಖೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ದಿನಗೂಲಿ ನೌಕರರ ಸಂಖ್ಯೆ: 4692

ಆ) ಅರಣ್ಯ ಇಲಾಖೆಯಲ್ಲಿ ಅರಣ್ಯ ರಕ್ಷಕರನ್ನಾಗಿ ಯಾರನ್ನು ದಿನಗೂಲಿ ಮೇಲೆ ತೆಗೆದುಕೊಂಡಿರುವುದಿಲ್ಲ. ಆದರೆ ಈ ಕೆಳಕಂಡ ಹುದ್ದೆಗಳಲ್ಲಿ ದಿನಗೂಲಿ ನೌಕರರನ್ನು ದಿನಾಂಕ 1-7-1984 ರಿಂದ 29-01-1990ರ ಅವಧಿಯೊಳಗೆ ತೆಗೆದುಕೊಳ್ಳಲಾಗಿದೆ.

1) ಪದವೀದರ ಮತ್ತು ಪದವೀದರೇತರ ಅಕ್ಷರಸ್ಥ ಸಹಾಯಕರು ಮತ್ತು ಇತರರು.
2) ವಾಹನ ಚಾಲಕರು
3) ಬೆರಳಚ್ಚುಗಾರರು
4) ಕಾವಲುಗಾರರು
5) ರಾತ್ರಿ ಕಾವಲುಗಾರರು
6) ಕಸಗುಡಿಸುವವರು
7) ಕೇರ್‌ಟೇಕರ್

8) ಅಡುಗೆ ಭಟ್ಟ

9) ವಾಟರ್ ಮಾಲಿ

10) ವಾಟರ್ ಕೂಲಿ

ಇ) ಇವರುಗಳು ಸುಮಾರು 15 ರಿಂದ 20 ವರ್ಷ ಮೀರಿ ಇಲಾಖೆಯಲ್ಲಿ ದಿನಗೂಲಿ ಮೇಲೆ ಕೆಲಸ ಮಾಡುತ್ತಿದ್ದಾರೆ.

ಈ) ದಿನಾಂಕ 1-7-1984ರ ನಂತರ ತೊಡಗಿಸಲಾದ ದಿನಗೂಲಿ ನೌಕರರನ್ನು ಸಕ್ರಮಗೊಳಿಸುವ ಕುರಿತು ಸಿವಿಲ್‌ಅಪೀಲ್ ಸಂಖ್ಯೆ: 3595-3612/1999 ಮತ್ತು ಸಿವಿಲ್ ಅಪೀಲ್ ಸಂಖ್ಯೆ: 1861-2063/2001 ಮತ್ತಿತರೆ ಸಿವಿಲ್ ಅಪೀಲ್‌ಗಳಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯದ ಸಂವಿಧಾನ ಪೀಠವು ಶ್ರೀಮತಿ ಉಮಾದೇವಿ ವಿರುದ್ಧ ಸರ್ಕಾರ ಪ್ರಕರಣದಲ್ಲಿ ದಿನಾಂಕ: 10-04-2006 ರಿಂದು ನೀಡಿದ ತೀರ್ಪಿನ ಹಿನ್ನೆಲೆಯಲ್ಲಿ ದಿನಗೂಲಿ ನೌಕರರ ಸೇವೆಯನ್ನು ಖಾಯಂಗೊಳಿಸಲು ಅವಕಾಶವಿಲ್ಲ.

ಆದರೆ ಈ ತೀರ್ಪನ್ನು ಅನುಸರಿಸಿ ಸರ್ಕಾರವು ಸುತ್ತೋಲೆ ಸಂಖ್ಯೆ: ಸಿಅಸುಇ 25 ಸೆಸ್ಥೇಅ 2003 ದಿನಾಂಕ 25-05-2006 ಮತ್ತು ಸಿಅಸುಇ 11 ಸೆಸ್ಥೇಅ 2003 ದಿನಾಂಕ 13-11-2006ರಲ್ಲಿ ಒಂದು ಬಾರಿ ಕ್ರಮವಾಗಿ ಯೋಗ್ಯತಾನುಸಾರ ದಿನಗೂಲಿ ನೌಕರರ ಸೇವೆಯನ್ನು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸಕ್ರಮಗೊಳಿಸಲು ಅವಕಾಶ ಮಾಡಿದೆ.

i) ಮಂಜೂರಾದ ಖಾಲಿ ಹುದ್ದೆಗಳಲ್ಲಿ ಸೂಕ್ತ ಅರ್ಹತೆ ಹೊಂದಿರುವ ನೌಕರರನ್ನು ನೇಮಕ ಮಾಡಿರಬೇಕು.

ii) ಹೀಗೆ ಅವರನ್ನು ನೇಮಕ ಮಾಡುವಾಗ ಅವರು ಸಂಬಂಧಿತ ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆಯನ್ನು ಹೊಂದಿರಬೇಕು.

iii) ಅಂತಹ ನೌಕರರು 10 ವರ್ಷಗಳಿಗಿಂ ಹೆಚ್ಚಿನ ಅವಧಿಗೆ ಸತತವಾಗಿ ಕಾರ್ಯ ನಿರ್ವಹಿಸುತ್ತಿರಬೇಕು.

iv) ಅಂತಹ ನೌಕರರು ಸಲ್ಲಿಸಿರುವ ಸೇವೆಯು ನ್ಯಾಯಾಲಯಗಳ ಅಥವಾ ನ್ಯಾಯಮಂಡಳಿಗಳ ಆದೇಶಕ್ಕೊಳಪಟ್ಟಿರಬಾರದು.

ನಂತರ ಸರ್ಕಾರವು ಆಗಸ್ಟ್ 2008 ರಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯದ ತೀರ್ಪಿನ ಹಿನ್ನಲೆಯಲ್ಲಿ ದಿನಗೂಲಿ ನೌಕರರ ಸಕ್ರಮಾತಿ ವಿಷಯವನ್ನು ಪರಿಶೀಲಿಸಲು ಸಚಿವ ಸಂಪುಟ ಉಪ ಸಮಿತಿಯನ್ನು ರಚಿಸಿದೆ.

ಒಳಚರಂಡಿ ಕಾಮಗಾರಿಯು ಸ್ಥಗಿತಗೊಂಡಿರುವುದು

759(793) ಶ್ರೀ ಅಶ್ವತ್ಥ್ ಎಂ ಸಿ:(ಚನ್ನಪಟ್ಟಣ) ಮಾನ್ಯ ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚನ್ನಪಟ್ಟಣ ನಗರಸಭೆ ವ್ಯಾಪ್ತಿಯಲ್ಲಿ ಒಳಚರಂಡಿ ವ್ಯವಸ್ಥೆಯ ಕಾಮಗಾರಿಯನ್ನು ಸ್ಥಗಿತಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಕಾಮಗಾರಿಯನ್ನು ಸ್ಥಗಿತಗೊಳಿಸಲು ಕಾರಣವೇನು; (ಪೂರ್ಣ ಮಾಹಿತಿ ನೀಡುವುದು);

ಇ) ಸ್ಥಗಿತಗೊಳಿಸಿರುವ ಕಾಮಗಾರಿಯನ್ನು ಮತ್ತೆ ಪ್ರಾರಂಭಿಸಲಾಗುವುದೇ;

ಈ) ಹಾಗಿದ್ದಲ್ಲಿ, ಎಂದಿನಿಂದ ಪ್ರಾರಂಭಿಸಲಾಗುವುದು?

ಶ್ರೀ ಎಸ್ ಸುರೇಶ್‌ಕುಮಾರ್:(ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು)

ಅ) ಚನ್ನಪಟ್ಟಣ ನಗರಸಭೆ ಒಳಚರಂಡಿ ಕಾಮಗಾರಿಯನ್ನು ದಿನಾಂಕ:16-11-2007ರಂದು ಪ್ರಾರಂಭಿಸಲಾಗಿದೆ. ಪ್ರಸ್ತುತ ಸದರಿ ಕಾಮಗಾರಿಯು ಪ್ರಗತಿಯಲ್ಲಿದೆ.

ಆ) ಜಲಶುದ್ಧೀಕರಣ ಘಟಕ ಸ್ಥಾಪಿಸಲು ಸ್ಥಳವನ್ನು ಸ್ಥಳೀಯ ಸಂಸ್ಥೆಯ ಹಸ್ತಾಂತರಿಸಿರುವುದಿಲ್ಲ. ಸದರಿ ಸ್ಥಳವನ್ನು ಹಸ್ತಾಂತರಿಸಿದ ನಂತರ ಕಾಮಗಾರಿಗಳನ್ನು ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುವುದು.

ಇ) ಅನ್ವಯಿಸುವುದಿಲ್ಲ.

ಈ) ಅನ್ವಯಿಸುವುದಿಲ್ಲ.